**<u>ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ, ಕೆ.ಆರ್.ನಗರ</u>**

ಸಿಸಿ ನಂ. 47/2024

**ಪಿರ್ಯಾದುದಾರರುಃ** ಶ್ರೀ ವಿ.ಆರ್.ಪವನ್ ಬಿನ್ ರಾಜೇಗೌಡ,

**--ವಿರುದ್ಧ –**

**ಆರೋಪಿಃ** ಶ್ರೀ ಸಯ್ಯದ್ ಜಮೀರ್ ಪಾಷ ಬಿನ್ ಮುನಾವರ್ ಪಾಷ,

## <u>ದಂಡ ಪ್ರಕ್ರಿಯೆ ಸಂಹಿತೆ ಕಲಂ 313 ರಡಿ ಆರೋಪಿಯ ಹೇಳಿಕೆ</u>

ಪ್ರಶ್ನೆ-1 ಫ್ರಾಸಾ-1 ಶ್ರೀ ವಿ.ಆರ್.ಪವನ್ ಬಿನ್ ರಾಜೇಗೌಡ, ರವರು ತಮ್ಮ ಸ್ವ ಇಚ್ಛಾ ಹೇಳಿಕೆಯಲ್ಲಿ ಆರೋಪಿಯಾದ ನೀವು ಫ್ರಾಸಾ-1 ರವರಿಗೆ ರೂ.4,50,000/- ಹಣವನ್ನು ಕಾನೂನು ಬದ್ಧವಾಗಿ ಕೊಡಬೇಕಾಗಿದ್ದು, ಅದರ ಮರು ಪಾವತಿಗಾಗಿ ನಿಮ್ಮ ಉಳಿತಾಯ ಖಾತೆ ಇರುವ **ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಕೆ ಆರ್ ನಗರ ಶಾಖೆ**, ಸೇರಿದ ಚೆಕ್ ಸಂಖ್ಯೆ **325900** ದಿನಾಂಕ: 10.10.2023 ವನ್ನು ನಮೂದಿಸಿ ಕೊಟ್ಟಿದ್ದೀರೆಂದು ಸಾಕ್ಷ್ಯ ನುಡಿದಿರುತ್ತಾರೆ, ನೀವೇನು ಹೇಳುವಿರಿ?

ಉತ್ತರಃ

ಪ್ರಶ್ನೆ-2 ಫ್ರಾಸಾ-1 ಶ್ರೀ ವಿ.ಆರ್.ಪವನ್ ಕೋಂ ರಾಜೇಗೌಡ, ರವರು ತಮ್ಮ ಸ್ವ ಇಚ್ಛಾ ಹೇಳಿಕೆಯಲ್ಲಿ ಮುಂದುವರೆದು ಸದರಿ ಚೆಕ್ಕನ್ನು ನಗದೀಕರಿಸಿಕೊಳ್ಳಲು, ತಮ್ಮ ಉಳಿತಾಯ ಖಾತೆ ಇರುವ **ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಕೆ ಆರ್ ನಗರ ಶಾಖೆ**, ಇಲ್ಲಿಗೆ ಹಾಜರುಪಡಿಸಿದಾಗ, ಸದರಿ ಬ್ಯಾಂಕ್ ನವರು "**ಸಾಕಷ್ಟು ಹಣವಿಲ್ಲ**" ಎಂಬ ಹಿಂಬರಹಗಳೊಂದಿಗೆ ದಿನಾಂಕ: 10.10.2023 ಮತ್ತು 03.01.2024 ರಂದು ಚೆಕ್ಕು ಹಿಂದಿರುಗಿತು ಎಂದು ಸಾಕ್ಷ್ಯ ನುಡಿದಿರುತ್ತಾರೆ, ನೀವೇನು ಹೇಳುವಿರಿ?

ಉತ್ತರಃ

ಪ್ರಶ್ನೆ-3 ಫ್ರಾ.ಸಾ.-1 ಶ್ರೀ ವಿ.ಆರ್.ಪವನ್ ಕೋಂ ರಾಜೇಗೌಡ, ರವರು ತಮ್ಮ ಸ್ವ ಇಚ್ಛಾ ಹೇಳಿಕೆಯಲ್ಲಿ ಮುಂದುವರೆದು ಅವರು ತಮ್ಮ ವಕೀಲರ ಮುಖಾಂತರ ಆರೋಪಿಯಾದ ನಿಮಗೆ ನೊಂದಾಯಿತ ಅಂಚೆ ಮೂಲಕ ತಿಳುವಳಿಕೆ ಪತ್ರ ಕಳುಹಿಸಿದರೂ ಸಹ ನೀವು ಕಾನೂನುಬದ್ಧವಾಗಿ ಪಾವತಿ ಮಾಡಬೇಕಾದ ಹಣವನ್ನು ಮರುಪಾವತಿ ಮಾಡಿರುವುದಿಲ್ಲ. ಆದ್ದರಿಂದ ನಿಮ್ಮ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ಸಾಕ್ಷ್ಯ ನುಡಿದಿರುತ್ತಾರೆ, ನೀವೇನು ಹೇಳುವಿರಿ?

ಉತ್ತರಃ

ಪ್ರಶ್ನೆ:4 ನಿಮಗೆ ಬೇರೆ ಏನಾದರೂ ಹೇಳುವುದು ಇದೆಯಾ?
ಉತ್ತರ:

ಪ್ರಶ್ನೆ: 5 ನಿಮ್ಮ ಪರ ಸಾಕ್ಷಿದಾರರು ಇದ್ದಾರೆಯೆ?
ಉತ್ತರ:

(ಮೇಲ್ಕಂಡ ಆರೋಪದ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ಆರೋಪಿಗೆ ಅರ್ಥವಾಗುವ ಭಾಷೆಯಲ್ಲಿ ಓದಿ ಹೇಳಿ ಆರೋಪಿ ನೀಡಿದ ಉತ್ತರಗಳನ್ನು ಸ್ವತಃ ನಾನೇ ಕೇಳಿಸಿಕೊಂಡು ನನ್ನ ಸ್ವ ಬರವಣಿಗೆಯಲ್ಲಿ ಉತ್ತರಗಳನ್ನು ನಮೂದು ಮಾಡಿರುತ್ತೇನೆ ಇವು ಆರೋಪಿ ತನ್ನ ಸ್ವಇಚ್ಛೆಯಿಂದ ನೀಡಿರುವ ಉತ್ತರಗಳಾಗಿರುತ್ತವೆ ಎಂದು ಈ ಮೂಲಕ ದೃಢೀಕರಿಸುತ್ತೇನೆ)

**ದಿನಾಂಕ: 29.10.2025**

**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ, ಕೆ ಆರ್ ನಗರ.**